**ಕರ್ನಾಟಕ ಸರ್ಕಾರ**

**ಸಮಗ್ರ ಮಕ್ಕಳ ರಕ್ಷಣಾ ಯೋಜನೆ**

ಸಂ.ಕೆಎಸ್‌ಐಸಿಪಿಎಸ್/ಕೋವಿಡ್-19/2020-21

ನಿರ್ದೇಶನಾಲಯ
ಸಮಗ್ರ ಮಕ್ಕಳ ರಕ್ಷಣಾ ಯೋಜನೆ,
ಬೆಂಗಳೂರು, ದಿನಾಂಕ:10.04.2020

ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು.

ಮಾನ್ಯರೇ,

ವಿಷಯ: ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಾಲ್ಲೂಕಿನ ವ್ಯಾಪ್ತಿಯಲ್ಲಿರುವ ಮಕ್ಕಳ ಪಾಲನಾ ಸಂಸ್ಥೆಗಳ ಮೇಲ್ವಿಚಾರಣೆ ಮಾಡುವ ಬಗ್ಗೆ.

ಉಲ್ಲೇಖ: ಮಾನ್ಯ ಸರ್ವೋಚ್ಚ ನ್ಯಾಯಾಲಯದ ದಿನಾಂಕ:3.04.2020 ರ SUO MOTO WRIT PETITION (CIVIL) No.4 OF 2020 ರ ನಿರ್ದೇಶನಗಳು.

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್-19ರ ಸೋಂಕು ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ತೀವ್ರ ನಿಗಾ ವಹಿಸುವಂತೆ ಉಲ್ಲೇಖಿತ ನಿರ್ದೇಶನದ ಮೇರೆಗೆ ಸತತವಾಗಿ ಮೇಲ್ವಿಚಾರಣೆ ಮಾಡುವ ಅಗತ್ಯತೆ ಹೆಚ್ಚಾಗಿರುತ್ತದೆ.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಬಳಿ ಏಕಮಾತ್ರ ವಾಹನವಿದ್ದು, ಇದರಲ್ಲಿ ಜಿಲ್ಲೆಯಾದ್ಯಂತ ಬಹುಸಂಖ್ಯೆಯಲ್ಲಿರುವ ಮಕ್ಕಳ ಪಾಲನಾ ಸಂಸ್ಥೆಗಳ ಮೇಲ್ವಿಚಾರಣೆ ಕಷ್ಟಸಾಧ್ಯವಾದ ವಿಚಾರವಾಗಿರುತ್ತದೆ. ಕೆಲವು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿರವರಿಗೆ ಕೋವಿಡ್ ಕಂಟ್ರೋಲ್ ರೂಂ ಕೆಲಸ ಕಾರ್ಯಗಳು ಹಾಗೂ ಕೋವಿಡ್-19 ಕುರಿತಂತೆ ಇನ್ನಿತರ ಕೆಲಸಕಾರ್ಯಗಳ ಜವಾಬ್ದಾರಿಯನ್ನು ಜಿಲ್ಲಾಡಳಿತದ ವತಿಯಿಂದ ವಹಿಸಲಾಗಿದೆ.

ತಾಲ್ಲೂಕಿನ ವ್ಯಾಪ್ತಿಯಲ್ಲಿರುವ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಕೋವಿಡ್-19 ಸಂಬಂಧವಾದ ಮೇಲ್ವಿಚಾರಣೆ, ಕಾಲಕಾಲಕ್ಕೆ ನೀಡಲಾಗುವ ಸೂಚನೆಗಳ ಅನುಪಾಲನೆ ಹಾಗೂ ಸಂಕಷ್ಟದ ಸಮಯದಲ್ಲಿ ತುರ್ತು ಕ್ರಮಗಳನ್ನು ಕೈಗೊಳ್ಳಲು ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಮ್ಮ ಜಿಲ್ಲೆಯ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳೊಡನೆ ಸಮನ್ವಯ ಹಾಗೂ ಸಹಕಾರದಿಂದ ಕರ್ತವ್ಯ ನಿರ್ವಹಿಸಲು ಸೂಚನೆ ನೀಡುವಂತೆ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿರುವ ಮಕ್ಕಳ ಹಿತದೃಷ್ಟಿಯಿಂದ ಕೋರಲಾಗಿದೆ.

ತಮ್ಮ ವಿಶ್ವಾಸಿ,

10.04.2020

ನಿರ್ದೇಶಕರು,
ಸಮಗ್ರ ಮಕ್ಕಳ ರಕ್ಷಣಾ ಯೋಜನೆ,
ಬೆಂಗಳೂರು.

ಪ್ರತಿಯನ್ನು:-

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಗೌರವಗಳೊಂದಿಗೆ ಸಲ್ಲಿಸಿದೆ.
2) ಎಲ್ಲಾ ಜಿಲ್ಲೆಗಳ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳವರ ಮಾಹಿತಿಗಾಗಿ ಕಳುಹಿಸಿದೆ.

REDMI NOTE 8
AI QUAD CAMERA